## 94. ಗ್ರಾಮಗಳಲ್ಲೂ ಕ್ವಾರಂಟೈನ್ ವ್ಯವಸ್ಥೆ

ಮುಂದಿನ ದಿನಗಳಲ್ಲಿ ಗ್ರಾಮೀಣ ಭಾಗದಲ್ಲೂ ಕ್ವಾರಂಟೈನ್ ವ್ಯವಸ್ಥೆ ಮಾಡಲಾಗುತ್ತದೆ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ.ಕೆ. ಸುಧಾಕರ್ ತಿಳಿಸಿದ್ದಾರೆ. ರಾಜ್ಯದ ಗಡಿ ಭಾಗದಲ್ಲಿ ಹೊರಗಡೆಯಿಂದ ಜನರು ಬರುತ್ತಿರುವುದರಿಂದ ಕೊರೊನಾ ಹೆಚ್ಚಾಗುತ್ತಿದೆ. ಆದರೆ, ಸೋಂಕು ಹರಡುವಿಕೆ ಸಾಮುದಾಯಿಕವಾಗಿಲ್ಲ. ಮುಂದಿನ ದಿನಗಳಲ್ಲಿ ಪರಿಸ್ಥಿತಿಗೆ ತಕ್ಕಂತೆ ಕ್ವಾರಂಟೈನ್ ವ್ಯವಸ್ಥೆ ಬದಲಾಯಿಸಿ ಗ್ರಾಮೀಣ ಭಾಗಕ್ಕೂ ವಿಸ್ತರಿಸಲಾಗುವುದು. ಲಾಕ್‌ಡೌನ್‌ನಿಂದಾಗಿ ರೋಗಾಣು ಸಾಯುವುದಿಲ್ಲ. ರೋಗ ತಡೆಯಲು ಬೇಕಾದ ಸಿದ್ಧತೆ ಮಾಡಿಕೊಳ್ಳಲು ಲಾಕ್‌ಡೌನ್ ಮಾಡಿದ್ದೇವೆ. ಹಿರಿಯರು ಹೆಚ್ಚು ಜಾಗೃತರಾಗಿರಬೇಕು. ಮಧ್ಯವಯಸ್ಕರು, ಯುವಕರು ಜೀವನ ಶೈಲಿಯನ್ನು ಬದಲಾಯಿಸಿಕೊಳ್ಳಬೇಕು. ಬೇರೆ ರಾಜ್ಯಗಳಿಗೆ ಹೋಲಿಸಿದರೆ ಕರ್ನಾಟಕ ಕೊರೊನಾ ನಿಯಂತ್ರಿಸುವಲ್ಲಿ ಬಹಳ ಮುಂದಿದೆ ಎಂದರು.

ಆಧಾರ:ಉದಯವಾಣಿ, ದಿನಾಂಕ:31.05.2020